ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.
<u>ಸಿ.ಸಿ.1215/2023</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಲೈಕ್ ಅಹಮ್ಮದ್ | ಪಿ.ಡಬ್ಲ್ಯೂ.1 |
| ತಂದೆಯ ಹೆಸರು | : | ಹೆಚ್.ಎಸ್.ಗಫಾರ್ ಸಾಬ್ | ಸಿ.ಡಬ್ಲ್ಯೂ.2 |
| ವಯಸ್ಸು | : | 52 ವರ್ಷ | |
| ವೃತ್ತಿ | : | ಚಾಲಕ | |
| ವಾಸ | : | ದಂಟರಮಕ್ಕಿ, ಚಿಕ್ಕಮಗಳೂರು | |

<u>ದಿನಾಂಕಃ 23-09-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ಆರೋಪಿಯ ಪರಿಚಯವಿಲ್ಲ. ನೋಟೀಸ್ ಹಾಗೂ ಮಹಜರ್ ಅನ್ನು ನೋಡುತ್ತಿದ್ದು ಅದನ್ನು ನಿಪಿ-1 ಮತ್ತು 2 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-1(ಎ) ಮತ್ತು ನಿಪಿ-2(ಎ) ಇರುತ್ತದೆ. ಸುಮಾರು 2 ವರ್ಷದ ಹಿಂದೆ ಸದರಿ ಸಹಿಯನ್ನು ಮಾಡಿರುತ್ತೇನೆ. ಕಳ್ಳತನವಾದ ವಿಚಾರದಲ್ಲಿ ಸದರಿ ಸಹಿಯನ್ನು ಮಾಡಿರುತ್ತೇನೆ. ಪೊಲೀಸರು ಸ್ಥಳದಲ್ಲಿ ಏನು ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಆ ಸಮಯದಲ್ಲಿ ಚಾಸಾ-1 ಹಾಗೂ ಪೊಲೀಸರು ಇದ್ದರು. ಪೊಲೀಸರು ಮತ್ತೆ ಏನನ್ನೂ ಸದರಿ ಸ್ಥಳದಲ್ಲಿ ಮಾಡಿರುವುದಿಲ್ಲ. ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-</u>

ಪೊಲೀಸರು ದಿಃ04.10.2021 ರಂದು ಸಂಜೆಃ06.00 ರಿಂದ 06.45 ರವರೆಗೆ ಘಟನಾ ಸ್ಥಳದಲ್ಲಿ ಚಾಸಾ-1 ರವರು ಸ್ಥಳವನ್ನು ತೋರಿಸಿದಂತೆ ನಿಪಿ-2 ರಂತೆ ಮಹಜರ್ ಅನ್ನು ತಯಾರಿಸಿದಾಗ ನಾನು ಸ್ಥಳದಲ್ಲಿ ಹಾಜರಿದ್ದು ಮಹಜರ್ ನ ಸಂಗತಿಗಳನ್ನು ತಿಳಿದುಕೊಂಡು ನಿಪಿ-2(ಎ) ರಂತೆ ಸಹಿಯನ್ನು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಈಗ ನನಗೆ ತೋರಿಸುತ್ತಿರುವ ಫೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈಗ ನನಗೆ ತೋರಿಸುತ್ತಿರುವ ಫೋಟೋ ತೆಗೆದಿರುತ್ತಾರೆ ಎಂದರೆ ಸರಿ. 4 ಫೋಟೋಗಳನ್ನು ಒಟ್ಟಾಗಿ ನಿಪಿ-3 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಬೇಕೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

(ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ).

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

C.C.No.1215/2023
PW-1 CW-2

ಎಸ್ಆರ್ಃ